## 86. ಖಾಸಗಿ ಶಿಕ್ಷಕರಿಗೂ ನೆರವು

ಕೊರೋನಾ ಹಿನ್ನೆಲೆಯಲ್ಲಿ ಶಾಲೆಗಳು ಸಕಾಲಕ್ಕೆ ಬಾಗಿಲು ತೆರೆಯದಿರುವುದರಿಂದ ಖಾಸಗಿ ಅನುದಾನರಹಿತ ಶಾಲೆಗಳ ಶಿಕ್ಷಕರು ತೀವ್ರ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನದಲ್ಲಿದೆ. ಅವರಿಗಾಗಿ ಯಾವುದಾದರೂ ರೀತಿಯಲ್ಲಿ ಸಹಾಯ ಮಾಡಲು ಇಲಾಖೆ ಚಿಂತನೆ ನಡೆಸಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್.ಸುರೇಶ್ ಕುಮಾರ್ ಹೇಳಿದರು.

ಶಿಕ್ಷಕರ ಸದನದಲ್ಲಿ ಸಹಾಯವಾಣಿ–ಶಿಕ್ಷಕವಾಣಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕೆಲಕಾಲ ಶಿಕ್ಷಕರು ತರಕಾರಿ ಮಾರಾಟ, ನರೇಗಾದಂತಹ ಕೆಲಸಗಳಿಗೆ ಹೋಗುವಂತಾದ ಸ್ಥಿತಿ ಕಂಡು ನಿಜಕ್ಕೂ ಬೇಸರವಾಗಿದೆ. ಅವರಿಗೆ ಯಾವ ರೀತಿಯಲ್ಲಿ ಸಹಾಯ ಮಾಡಬೇಕೆಂಬ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆ. ಈಗಾಗಲೇ ಅಂತಹ ಶಿಕ್ಷಕರು ಮತ್ತು ಆ ಶಾಲೆಗಳ ಸಿಬ್ಬಂದಿಯ ಅಂಕಿ–ಸಂಖ್ಯೆಗಳನ್ನು ಸಂಗ್ರಹಿಸಲಾಗುತ್ತದೆ. ಆದರೆ ಅವರ ಸಂಖ್ಯೆ ಸಾಕಷ್ಟು ದೊಡ್ಡ ಪ್ರಮಾಣದಲ್ಲಿರುವುದರಿಂದ ಆ ಬೃಹತ್ ಪ್ರಮಾಣದ ಸಂಖ್ಯೆಗೆ ಸಹಾಯ ಮಾಡುವುದರತ್ತ ಎಲ್ಲ ಆಯಾಮಗಳಿಂದಲೂ ಸರ್ಕಾರ ಚಿಂತನೆ ನಡೆಸಿದೆ ಎಂದರು.

ಶಾಲೆಗಳ ಆರಂಭದ ಕುರಿತು ಇನ್ನೂ ಯಾವುದೇ ಸೂಚನೆಗಳಿಲ್ಲ. ಈ ಮಾಸಾಂತ್ಯದ ವೇಳೆಗೆ ಶಾಲೆಗಳು ಯಾವಾಗ ಆರಂಭವಾಗಲಿವೆ ಎಂಬುದಕ್ಕೆ ಒಂದು ಸ್ಪಷ್ಟ ರೂಪ ದೊರೆಯಬಹುದಾಗಿದೆ. ಅಲ್ಲಿಯವರೆಗೆ ಶಾಲೆಗಳನ್ನು ಆರಂಭಿಸಲು ಆತುರ ಪಡುವುದಿಲ್ಲ. ಕಳೆದ ಸಾಲಿನಲ್ಲಿ ಭರವಸೆ ನೀಡಿದ್ದನೋ ಅದರಂತೆ ವರ್ಗಾವಣಾ ಪ್ರಕ್ರಿಯೆ ನಡೆಯಲಿದೆ. ಕಡ್ಡಾಯ ಮತ್ತು ಹೆಚ್ಚುವರಿ ಶಿಕ್ಷಕರಿಗೆ ಮೊದಲ ಆದ್ಯತೆ ದೊರೆಯಲಿದೆ. 50 ವರ್ಷ ದಾಟಿದವರಿಗೆ ವರ್ಗಾವಣೆಯಿಂದ ವಿನಾಯಿತಿ ನೀಡಲಾಗುವುದು ಎಂದರು. ಶಿಕ್ಷಕ ಮಿತ್ರ ಆ್ಯಪ್‌ಗೆ ಈಗಾಗಲೇ 2.50 ಲಕ್ಷ ಶಿಕ್ಷಕರ ಮಾಹಿತಿ ಅಪ್ಲೋಡ್ ಆಗಿದೆ. ಇದರಿಂದ ಇಡೀ ಪ್ರಕ್ರಿಯೆಗೆ ಪಾರದರ್ಶಕತೆ ಲಭ್ಯವಾಗಿದೆ. ತಂತ್ರಜ್ಞಾನಧಾರಿತ ವ್ಯವಸ್ಥೆಗೆ ಇದೇ ಮೊದಲ ಬಾರಿಗೆ ಇಲಾಖೆ ಸಜ್ಜುಗೊಂಡಿದೆ. ಶಿಕ್ಷಕರು ತಾವಿರುವ ಸ್ಥಳದಿಂದಲೇ ಶಿಕ್ಷಕ ಮಿತ್ರ– ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ವರ್ಗಾವಣೆಗೆ ಅರ್ಜಿ ಸಲ್ಲಿಸುವ ತಾಂತ್ರಿಕ ಸೌಲಭ್ಯ, ಶಿಕ್ಷಕರಿಗೆ ಇಲಾಖೆ ಸೇವೆಗಳನ್ನು ಇಂತಿಷ್ಟೇ ದಿನಗಳೊಳಗೆ ನೀಡಬೇಕೆಂದು ಒಂದೊಂದು ಸೇವೆಗೆ ಪ್ರತ್ಯೇಕ ದಿನಗಳನ್ನು ನಿಗದಿಪಡಿಸಲಿದ್ದು, ಆ ದಿನಗಳೊಳಗೆ ಸೇವೆಗಳು ದೊರೆಯಲಿವೆ ಎಂದರು.

**ಶಿಕ್ಷಕರ ಸಮಸ್ಯೆ ಬಗೆಹರಿಯುತ್ತದೆ: ಸಿಎಂ**

ಶಿಕ್ಷಕರ ಇಲಾಖೆ ಹೊರತಂದಿರುವ ಆ್ಯಪ್‌ನಿಂದಾಗಿ ಶಿಕ್ಷಕರ ಸೇವಾ ವಿಷಯ ಹಾಗೂ ಸಮಸ್ಯೆಗಳನ್ನು ಬಗೆಹರಿಸಬಹುದು. ಇದರಿಂದ ಶಿಕ್ಷಕರ ಅಲೆದಾಟ ಮುಗಿಯಲಿದೆ. ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯನ್ನು ಆ್ಯಪ್ ಮೂಲಕ ಮಾಡಲಾಗುತ್ತದೆ. ಸಚಿವ ಸುರೇಶ್ ಕುಮಾರ್, ಶಿಕ್ಷಕರ ವರ್ಗಾವಣೆ ನೀತಿಯನ್ನು ತರುವ ಮೂಲಕ ವರ್ಗಾವಣೆ ಪ್ರಕ್ರಿಯೆ ಸುಗಮಗೊಳಿಸಿದ್ದಾರೆ. ಅನೇಕ ವಿದ್ಯಾರ್ಥಿಗಳು ಖಾಸಗಿ ಶಾಲೆಯಿಂದ ಸರ್ಕಾರಿ ಶಾಲೆಗಳಿಗೆ ಸೇರುತ್ತಿದ್ದಾರೆ. ಒಬ್ಬ ಸಚಿವರು ಹೇಗೆ ಜನಮುಖಿಯಾಗಿ ಕೆಲಸ ಮಾಡಬಹುದೆಂಬುದಕ್ಕೆ ಸಚಿವರು ಮಾದರಿಯಾಗಿದ್ದಾರೆ ಎಂದರು.

**ಏಕರೂಪ ಪರೀಕ್ಷಾ ಮಂಡಳಿ:**ಸಚಿವ ಸುರೇಶ್ ಕುಮಾರ್ ಮಾತನಾಡಿ, ಇನ್ನು ಮುಂದೆ ಒಂದೇ ಪರೀಕ್ಷಾ ಮಂಡಳಿ ಇರಲಿದೆ. ಎಸ್.ಎಸ್.ಎಲ್.ಸಿ ಪರೀಕ್ಷಾ ಮಂಡಳಿ ಹಾಗೂ ಪಿಯುಸಿ ಪರೀಕ್ಷಾ ಮಂಡಳಿಯ ವಿಲೀನ ಮಾಡಲಾಗುವುದು. ಆ ಮೂಲಕ ಏಕರೂಪ ಪರೀಕ್ಷಾ ಮಂಡಳಿಯನ್ನು ಜಾರಿಗೊಳಿಸಲಿದ್ದೇವೆ. ಈ ಬಾರಿ 1000 ಉಭಯ ಮಾಧ್ಯಮ ಶಾಲೆಗಳನ್ನು ಆರಂಭಿಸುತ್ತಿದ್ದು, ಶಿಕ್ಷಣ ನೀತಿಯನ್ನು ಜಾರಿಗೊಳಿಸುವ ಮೂಲಕ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗಲಿದೆ. ಶಿಕ್ಷಕರ ಬಹುದಿನದ ಬೇಡಿಕೆಯಾಗಿದ್ದ ವರ್ಗಾವಣೆ ಕಾನೂನನ್ನು ಜಾರಿಗೊಳಿಸಲಾಗಿದ್ದು, ಹಿಂದಿನ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ದೊರಕಲಿದೆ ಎಂದರು.

ಆಧಾರ:ವಿಶ್ವವಾಣಿ, ದಿನಾಂಕ:29.08.2020